ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಶುದ್ಧ ಕುಡಿಯುವ ನೀರಿನ ಘಟಕಗಳ ಕುರಿತು

ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು) -

29 (31) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಇದುವರೆಗೂ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಾಣ ಮಾಡಲಾಗಿದೆ; (ವರ್ಷವಾರು ಜಿಲ್ಲಾವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಈ ಘಟಕಗಳ ನಿರ್ಮಾಣಕ್ಕೆ ಸರ್ಕಾರವು ಇದುವರೆಗೂ ಖರ್ಚು ಮಾಡಿರುವ ಹಣ ಎಷ್ಟು; (ವಿವರ ನೀಡುವುದು)

(ಇ) ಸಾವಿರಾರು ಕೋಟಿ ಹಣ ಖರ್ಚು ಮಾಡಿ ಕುಡಿಯುವ ಶುದ್ಧ ನೀರಿನ ಘಟಕಗಳನ್ನು ನಿರ್ಮಾಣ ಮಾಡಿದಾಗ್ಯೂ ಅವುಗಳು ಅಧಿಕಾರಿ/ಸಿಬ್ಬಂದಿಗಳ ನಿರ್ಲಕ್ಷ್ಯದಿಂದ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಈ) ಸಾರ್ವಜನಿಕರ ಆರೋಗ್ಯದ ಹಿತಿದೃಷ್ಟಿಯಿಂದ ನಿರ್ಮಾಣ ಮಾಡಿರುವ ಈ ಶುದ್ಧ ನೀರಿನ ಘಟಕಗಳನ್ನು ವ್ಯವಸ್ಥಿತವಾಗಿ ನಿರ್ವಹಿಸದಿರುವವರ ಮೇಲೆ ಸರ್ಕಾರ ಯಾವ ಕ್ರಮಕೈಗೊಂಡಿದೆ; (ವಿವರ ನೀಡುವುದು)

(ಉ) ಸ್ಥಾಪನೆಯಾದ ದಿನದಿಂದ ಶುದ್ಧ ನೀರಿನ ಘಟಕಗಳು ಇದುವರೆಗೂ ಕಾರ್ಯಾರಂಭ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ರಾಜ್ಯದ್ಯಾಂತ ಈ ರೀತಿ ಕಾರ್ಯಾರಂಭ ಮಾಡಿರುವ ಘಟಕಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ತಾಲ್ಲೂಕುವಾರು ಸ್ಪಷ್ಟ ಮಾಹಿತಿ ಒದಗಿಸುವುದು)